1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ

Spl.C.94/2015

ದಿಃ 14.11.2019

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-5 Pw-2

| | | |
|---|---|---|
| ಹೆಸರು | ಃ | ಚಂದ್ರಮ್ಮ |
| ಗಂಡನ ಹೆಸರು | ಃ | ರಾಜು |
| ವಯಸ್ಸು | ಃ | 43 ವರ್ಷ |
| ಉದ್ಯೋಗ | ಃ | ಕೂಲಿ ಕೆಲಸ |
| ವಾಸಸ್ಥಳ | ಃ | ಮಾಗಡಿ |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ನನಗೆ ಗೊತ್ತಿಲ್ಲ. 2ನೇ ಆರೋಪಿ ನನಗೆ ಗೊತ್ತು. 2 ನೇ ಆರೋಪಿ ನನ್ನ ದೊಡ್ಡಮ್ಮನ ಮಗಳಾಗಿದ್ದು, ಬೆಂಗಳೂರಿನ ಅಂಜನಾನಗರದಲ್ಲಿ ವಾಸಿಸುತ್ತಿದ್ದಾರೆ. ಈಗ್ಗೆ ಸುಮಾರು 4-5 ವರ್ಷಗಳ ಹಿಂದೆ ಪೊಲೀಸರು ಠಾಣೆಯ ಬಳಿ ಕರೆದು, ಜಾಮೀನು ಆಗಿದೆ, ಸಹಿ ಮಾಡಿ ಎಂದು ಕರೆದು ಸಹಿ ಪಡೆದಿರುತ್ತಾರೆ. ಆ ಸಹಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿದಾರರು ಎರಡು ಮಹಜರ್‌ಗಳು ಮತ್ತು ಅವುಗಳಲ್ಲಿರುವ ತಮ್ಮ ಸಹಿಗಳನ್ನು ಗುರುತಿಸಿದ್ದು, ಅವುಗಳನ್ನು ನಿ.ಪಿ.5, ನಿ.ಪಿ.6, 5(ಎ) ಮತ್ತು 6(ಎ) ಎಂದು

ಗುರುತಿಸಲಾಯಿತು. ನನಗೆ ಈ ಸಹಿಗಳನ್ನು ಪೊಲೀಸರು ಇತರೆ ಯಾವ ಉದ್ದೇಶಕ್ಕೆ ಪಡೆದಿರುತ್ತಾರೆಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

ದಿಃ06.09.2014 ರಂದು ಮಧ್ಯಾಹ್ನ 1.30 ರಿಂದ 2.30 ರ ಸಮಯದಲ್ಲಿ 2 ನೇ ಆರೋಪಿಯ ಮನೆ ಬಳಿ ನನ್ನ ಮತ್ತು ಚಾಸಾ.4 ರವರ ಸಮಕ್ಷಮ, ಸ್ಥಳವನ್ನು ಪೊಲೀಸರು ಪರಿಶೀಲಿಸಿ, ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿಯೇ ನಮ್ಮ ಸಹಿ ಪಡೆದರು ಎಂದು ಸೂಚಿಸುವುದು ಸರಿಯಲ್ಲ.

2. ದಿಃ06.09.2014 ರಂದು ಮಧ್ಯಾಹ್ನ 2.45 ರಿಂದ 3.30 ರ ಸಮಯದಲ್ಲಿ ನನ್ನ ಮತ್ತು ಚಾಸಾ.4 ರವರ ಸಮಕ್ಷಮ, ಸ್ಥಳವನ್ನು ಪೊಲೀಸರು ಪರಿಶೀಲಿಸಿ, ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿಯೇ ನಮ್ಮ ಸಹಿ ಪಡೆದರು ಎಂದು ಸೂಚಿಸುವುದು ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

**<u>ಪಾಟೀ ಸವಾಲುಃ ಶ್ರೀ. ಕೆ.ಟಿ.ವಿ., ವಿ.ಎಸ್.ಹೆಚ್, ಕೆ.ಸಿ.ಎಂ., ಬಿ.ಹೆಚ್.ಹೆಚ್., ಮತ್ತು ಎಂ.ಎನ್,ಪಿ., ವಕೀಲರಿಂದ ಆರೋಪಿಗಳ ಪರವಾಗಿಃ ಇಲ್ಲವೆಂದಿದ್ದಾರೆ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಮರುಳಸಿದ್ಧಾರಾಧ್ಯ ಹೆಚ್.ಜೆ)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.